ಅಕಸ್ಮಾತ್ ಆಗಿ ಮಕರ ಜೋತಿ ದರ್ಶನದ ಸಂದರ್ಭದಲ್ಲಿ ನಾವು ಬೇಕಾದರೆ ನಮ್ಮ ಸರ್ಕಾರದ ವತಿಯಿಂದ ಬೇಕಾದರೆ 108 ವಾಹನವನ್ನು ಕೂಡ ಅಲ್ಲಿಗೆ ಕೊಟ್ಟು ಅಲ್ಲಿ ಸಂಚಾರ ಮಾಡಿ, ಅಲ್ಲೇನದರೂ ಆಕಸ್ಮಿಕವಾಗಿ ಈ ತರಹ ದುರ್ಘಟನೆ ನಡೆದರೆ 108 ವಾಹನಕ್ಕೆ ಫೋನ್ ಮಾಡಿ ಅಲ್ಲಿ ಬೇಕಾದರೆ ಪ್ರಾಣ ಉಳಿಸುವಂತಹ ಕೆಲಸ ಕೂಡ ಆಗಬಹುದು ಎಂದು ನಾನು ಮಾನ್ಯ ಕೇರಳದ ಮುಖ್ಯಮಂತ್ರಿಗಳಿಗೆ ನಾನು ಪತ್ರವನ್ನು ಬರೆದಿದ್ದೇನೆ. ಅದೇ ರೀತಿ ನಾನು ಮುಂಬರುವಂತಹ ದಿನಗಳಲ್ಲಿ ಈ ಮಕರ ಜೋತಿ ನಡೆಯುವಂತಹ ಸಂದರ್ಭದಲ್ಲಿ ಅವರಿಗೆ ಪತ್ರವನ್ನು ಬರೆದಿದ್ದೇನೆ? ನೀವು ಆಕಸ್ಮಿಕವಾಗಿ ಈ ರೀತಿ ಆದಾಗ ನೀವು ನಮಗೆ permission ಕೊಟ್ಟರೆ ನಾವು ಒಂದು ವೈದ್ಯರ ತಂಡವನ್ನು ಕೂಡ ಕರ್ನಾಟಕ ರಾಜ್ಯದಿಂದ ಕಳಿಸಿಕೊಡುತ್ತೇವೆ ಎನ್ನುವಂತಹ ಮಾತನ್ನು ನಾನು ಮಾನ್ಯ ಕೇರಳ ಮುಖ್ಯಮತ್ರಿಗಳಲ್ಲಿ ಕೇಳಿಕೊಂಡಿದ್ದೇನೆ. ತಾವು ತಂದಂತಹ ಸಂತಾಪ ಸೂಚನೆಗೆ ನಾನು ಬೆಂಬಲವನ್ನು ವ್ಯಕ್ತಪಡಿಸುತ್ತಾ ತಮ್ಮೆಲ್ಲರಿಗೂ ಧನ್ಯವಾದಗಳನ್ನು ಸಲ್ಲಿಸಿ ನನ್ನ ಮಾತನ್ನು ಮುಗಿಸುತ್ತೇನೆ.

ಅಧ್ಯಕ್ಷರು: ಮೃತರ ಗೌರವಾರ್ಥ ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ತಮ್ಮಲ್ಲಿ ಕೋರುತ್ತೇನೆ.

(ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಒಂದು ನಿಮಿಷ ಮೌನವನ್ನು ಆಚರಿಸಿದರು)

ಅಧ್ಯಕ್ಷರು: ಈ ಸದನವು ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಮೃತರ ಕುಟುಂಬಕ್ಕೆ ಕಳುಹಿಸಲಾಗುವುದು.

2. ಕಾರ್ಯದರ್ಶಿಯವರ ವರದಿ

ಅಧ್ಯಕ್ಷರು: ಮಾನ್ಯ ಕಾರ್ಯದರ್ಶಿಯವರು ವರದಿಯನ್ನು ಮಂಡಿಸುವುದು.

ಕಾರ್ಯದರ್ಶಿ (ಕರ್ನಾಟಕ ವಿಧಾನಸಭೆ ಸಚಿವಾಲಯ): ಗೌರವಾನ್ವಿತ ಸಭಾಧ್ಯಕ್ಷರ ಅನುಮೋದನೆಯೊಂದಿಗೆ ಕಳೆದ ಅಧಿವೇಶನದಲ್ಲಿ ಮಂಡಿಸಿದ ವರದಿಯ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಈಗ ಸಭೆಯ ಮುಂದೆ ಮಂಡಿಸುತ್ತೇನೆ.

1. ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2010
2. ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯ ವಿಧೇಯಕ, 2009
3. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ವಿಧೇಯಕ, 2009

4. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕ, 2009
5. ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕ, 2009
6. ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕ, 2010
7. ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕ, 2010
8. ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2010
9. ಅಲೆಯನ್ಸ್ ವಿಶ್ವವಿದ್ಯಾಲಯ ವಿಧೇಯಕ, 2010
10. ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2010
11. ಕರ್ನಾಟಕ ನ್ಯಾಯವಾದಿಗಳ ಕಲ್ಯಾಣನಿಧಿ (ತಿದ್ದುಪಡಿ) ವಿಧೇಯಕ, 2010
12. ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2010
13. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ವಿಧೇಯಕ, 2010
14. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2010
15. ಕರ್ನಾಟಕ ಹೆದ್ದಾರಿ (ತಿದ್ದುಪಡಿ) ವಿಧೇಯಕ, 2010
16. ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2010
17. ಬೆಂಗಳೂರು ನೀರು ಸರಬರಾಜು ಮತ್ತು ಒಳ ಚರಂಡಿ (ತಿದ್ದುಪಡಿ) ವಿಧೇಯಕ, 2010
18. ಕರ್ನಾಟಕ ನೀರಾವರಿ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2010
19. ಕರ್ನಾಟಕ ಭೂಸುಧಾರಣೆಗಳ (ತಿದ್ದುಪಡಿ) ವಿಧೇಯಕ, 2010
20. ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕ, 2010
21. ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2010
22. ಕರ್ನಾಟಕ ಮಾಹಿತಿ ತಂತ್ರಜ್ಞಾನ ಹೂಡಿಕೆ ಪ್ರದೇಶಗಳ ವಿಧೇಯಕ, 2010
23. ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕ, 2011
24. ಕರ್ನಾಟಕ ವಿಧಾನ ಮಂಡಲದವರ ವೇತನ, ನಿವೃತ್ತಿ ವೇತನ ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕ, 2010

25. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕ, 2011
26. ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2011
27. ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2011
28. ಕರ್ನಾಟಕ ರಾಜ್ಯ ಸಾರ್ವಜನಿಕ ದಾಖಲೆಗಳ ವಿಧೇಯಕ, 2010

ಅಧ್ಯಕ್ಷರು: ಮಂಡಿಸಲಾಯಿತು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಅ) ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು): ಮಾನ್ಯ ಸಭಾಧ್ಯಕ್ಷರೆ, ಕರ್ನಾಟಕ ಮಧ್ಯಮಾವಧಿ ವಿತ್ತೀಯ ಯೋಜನೆ 2011–15ರ ಪ್ರತಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

(ಆ) ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು): ಮಾನ್ಯ ಸಭಾಧ್ಯಕ್ಷರೆ, ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 2009–10ನೇ ಸಾಲಿನ ಹಣಕಾಸು ಲೆಕ್ಕ ಪತ್ರಗಳು ಹಾಗೂ ಧನವಿನಿಯೋಗ ಲೆಕ್ಕಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

(ಇ) ಕಾರ್ಯದರ್ಶಿ (ಕರ್ನಾಟಕ ವಿಧಾನಸಭೆ ಸಚಿವಾಲಯ): ಮಾನ್ಯ ಸಭಾಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ(ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2011ನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು. ಈಗ ಸದನವನ್ನು ಸೋಮವಾರ ಬೆಳಿಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ವಿಧಾನ ಸಭೆಯ ಕಾರ್ಯಕಲಾಪವು ಮಧ್ಯಾಹ್ನ 2.15ಕ್ಕೆ ಮುಕ್ತಾಯವಾಗಿ ಪುನಃ ಸೋಮವಾರ ದಿನಾಂಕ 28–2–2011ರಂದು ಬೆಳಿಗ್ಗೆ 11.00 ಗಂಟೆಗೆ ಸಮಾವೇಶಗೊಳ್ಳಲು ನಿಶ್ಚಯಿಸಿತು).

+ಈ ಚಿಹ್ನೆ ಮಾನ್ಯ ಸದಸ್ಯರುಗಳು ಭಾಷಣ ಅಥವಾ ಟಿಪ್ಪಣಿಯನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ.